**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003.**

ಸಂಖ್ಯೆ: ಎ1/ಎಸ್.ಎಸ್.ಎಲ್.ಸಿ/ಪ–2/04/2024–25 ದಿನಾಂಕ:16.05.2024

**::ಸುತ್ತೋಲೆ::**

ವಿಷಯ:– 2024ರ ಎಸ್.ಎಸ್.ಎಲ್.ಸಿ ಪರೀಕ್ಷೆ–2ಕ್ಕೆ ಹಾಜರಾಗಿ **ಫಲಿತಾಂಶ ಉತ್ತಮಪಡಿಸಿಕೊಳ್ಳುವ** ವಿದ್ಯಾರ್ಥಿಗಳಿಗೆ ನೋಂದಣಿ ಮಾಡಿಕೊಳ್ಳುವ ಕುರಿತು.

ಉಲ್ಲೇಖ: 1. ಸರ್ಕಾರದ ಅದೇಶ ಸಂಖ್ಯೆ: 203 ಎಸ್ ಎಲ್ ಬಿ 2023 ದಿನಾಂಕ: 21.09.2023
2. ಈ ಕಛೇರಿ ಪರಿಷ್ಕೃತ ಮಾರ್ಗಸೂಚಿ ಎ1/ಎಸ್.ಎಸ್.ಎಲ್.ಸಿ/ಪ–2/04/2024–25 ದಿನಾಂಕ:10.05.2024

* * * * *

2024 ರ ಎಸ್.ಎಸ್.ಎಲ್.ಸಿ ಪರೀಕ್ಷೆ–1ಕ್ಕೆ ನೋಂದಾಯಿಕೊಂಡು ಪರೀಕ್ಷೆಗೆ ಗೈರು ಹಾಜರಾದ / ಪೂರ್ಣಗೊಳಿಸಲಾಗಿಲ್ಲದ [Not Completed] / ಹಿಂದಿನ ಸಾಲಿನಲ್ಲಿ ಅನುತ್ತೀರ್ಣರಾದ ಹಾಗೂ **ಫಲಿತಾಂಶ ಉತ್ತಮಪಡಿಸಿಕೊಳ್ಳುವ** ಅಭ್ಯರ್ಥಿಗಳಿಗೆ 2024ರ ಜೂನ್ ಮಾಹೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ–2ನ್ನು ನಡೆಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಪರೀಕ್ಷೆ–1ಕ್ಕೆ ಗೈರು ಹಾಜರಾದ / ಪೂರ್ಣಗೊಳಿಸಲಾಗಿಲ್ಲದ [Not Completed] ಪುನರಾವರ್ತಿತ ಹಾಗೂ ಫಲಿತಾಂಶ ಉತ್ತಮಪಡಿಸಿಕೊಳ್ಳುವ ಅಭ್ಯರ್ಥಿಗಳು ಪರೀಕ್ಷೆ–2ಕ್ಕೆ ಅರ್ಜಿ ಸಲ್ಲಿಸಲು ಉಲ್ಲೇಖ–2ರ ಮಾರ್ಗಸೂಚಿಯಲ್ಲಿ ಈಗಾಗಲೇ ತಿಳಿಸಲಾಗಿರುತ್ತದೆ.

ಉಲ್ಲೇಖ–1ರ ಸರ್ಕಾರದ ಅದೇಶದಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ–1 ರಲ್ಲಿ ತೇರ್ಗಡೆ ಹೊಂದಿ ತಮ್ಮ ಫಲಿತಾಂಶವನ್ನು ಉತ್ತಮ ಪಡಿಸಿಕೊಳ್ಳಲು ಇಚ್ಛಿಸಿದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಪರೀಕ್ಷೆ–2 ಮತ್ತು 3 ಕ್ಕೆ ಹಾಜರಾಗಲು ಅವಕಾಶ ಕಲ್ಪಿಸಿ ಈ ಮೂರು ಪರೀಕ್ಷೆಗಳಲ್ಲಿ ಗಳಿಸುವ ಅಂಕಗಳಲ್ಲಿ ಗರಿಷ್ಠ ಅಂಕಗಳನ್ನು ಫಲಿತಾಂಶಕ್ಕೆ ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ ಈ ಹಿನ್ನಲೆಯಲ್ಲಿ ವಿದ್ಯಾರ್ಥಿಗಳು ಪರೀಕ್ಷೆ–2ಕ್ಕೆ ಹಾಜರಾಗಿ ತಮ್ಮ ಫಲಿತಾಂಶವನ್ನು ಉತ್ತಮಪಡಿಸಿಕೊಳ್ಳಲು ಅವಕಾಶ ಕಲ್ಪಿಸಲಾಗುತ್ತಿದೆ.

ಮುಂದುವರೆದು, 2024ರ ಎಸ್.ಎಸ್.ಎಲ್.ಸಿ ಪರೀಕ್ಷೆ–1ರಲ್ಲಿ ತೇರ್ಗಡೆ ಹೊಂದಿ ಮುಂದಿನ ವಿದ್ಯಾಭ್ಯಾಸಕ್ಕಾಗಿ ಮೂಲ ಶಾಲೆಯಿಂದ ವರ್ಗಾವಣೆ ಪ್ರಮಾಣ ಪತ್ರವನ್ನು ಈಗಾಗಲೇ ಪಡೆದಿರುವ ವಿದ್ಯಾರ್ಥಿಗಳು ಪರೀಕ್ಷೆ–2ಕ್ಕೆ ಹಾಜರಾಗಿ ತಮ್ಮ ಫಲಿತಾಂಶವನ್ನು ಉತ್ತಮ ಪಡಿಸಿಕೊಳ್ಳುವ ಸಲುವಾಗಿ ಅರ್ಜಿ ಸಲ್ಲಿಸಲು ಶಾಲಾ ಮುಖ್ಯ ಶಿಕ್ಷಕರನ್ನು ಭೇಟಿ ಮಾಡಿ ಕೋರಿಕೆ ಸಲ್ಲಿಸಿದ ಸಂದರ್ಭದಲ್ಲಿ, ವಿದ್ಯಾರ್ಥಿಯು ಈಗಾಗಲೇ ಶಾಲೆಯಿಂದ ವರ್ಗಾವಣೆ ಪ್ರಮಾಣ ಪತ್ರವನ್ನು ಪಡೆದಿರುವುದರಿಂದ ಪರೀಕ್ಷೆ–2ಕ್ಕೆ ಅರ್ಜಿ ಸಲ್ಲಿಸಲು ಸಂಬಂಧಿಸಿದ ಶಾಲಾ ಮುಖ್ಯಶಿಕ್ಷಕರು ನಿರಾಕರಿಸುತ್ತಿರುವ ಬಗ್ಗೆ ಮಂಡಲಿಗೆ ದೂರುಗಳು ಬಂದಿರುತ್ತದೆ. ಹಾಗಾಗಿ 2024ರ ಎಸ್.ಎಸ್.ಎಲ್.ಸಿ ಪರೀಕ್ಷೆ–1ರಲ್ಲಿ ತೇರ್ಗಡೆ ಹೊಂದಿ ಮುಂದಿನ ವಿದ್ಯಾಭ್ಯಾಸಕ್ಕಾಗಿ ಮೂಲ ಶಾಲೆಯಿಂದ ವರ್ಗಾವಣೆ ಪ್ರಮಾಣ ಪತ್ರ ಪಡೆದಿದ್ದರೂ ಸಹ, ಅಂತಹ ವಿದ್ಯಾರ್ಥಿಗಳು ಪರೀಕ್ಷೆ–2ಕ್ಕೆ ಹಾಜರಾಗಲು ಇಚ್ಛಿಸಿದಲ್ಲಿ ಅಂತಹ ವಿದ್ಯಾರ್ಥಿಗಳ ಮನವಿಯನ್ನು ಪರಿಗಣಿಸಿ 2024 ರ ಎಸ್.ಎಸ್.ಎಲ್.ಸಿ ಪರೀಕ್ಷೆ–2ಕ್ಕೆ ನೋಂದಾಯಿಸಲು ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರುಗಳಿಗೆ ಅಗತ್ಯ ಸೂಚನೆಗಳನ್ನು ನೀಡಲು ತಿಳಿಸಿದೆ.

16/5/2024

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

ಪ್ರತಿಯನ್ನು ಅಗತ್ಯ ಕ್ರಮಕ್ಕಾಗಿ:

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆರವರಿಗೆ
2. ರಾಜ್ಯದ ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳು ಶಾಲಾ ಶಿಕ್ಷಣ ಇಲಾಖೆರವರಿಗೆ
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು. ಶಾಲಾ ಶಿಕ್ಷಣ ಇಲಾಖೆರವರಿಗೆ

4. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಶಿಕ್ಷಕರುಗಳಿಗೆ
5. ಶಾಖಾಧಿಕಾರಿಗಳು ಗಣಕಶಾಖೆ ರವರಿಗೆ ಕಳುಹಿಸುತ್ತಾ, ಈ ಸುತ್ತೋಲೆಯನ್ನು ಮಂಡಳಿಯ ಜಾಲತಾಣ & ಶಾಲಾ ಲಾಗಿನ್‌ನಲ್ಲಿ ಪ್ರಕಟಿಸುವುದು.
6. ಮಂಡಳಿಯ ಎ, ಬಿ, ಸಿ ಮತ್ತು ಎಲ್ಲಾ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳಿಗೆ

**ಪ್ರತಿಯನ್ನು ಮಾಹಿತಿಗಾಗಿ;**

1. ಮಾನ್ಯ ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಈ ಪತ್ರವನ್ನು ಮಾನ್ಯ ಅಧ್ಯಕ್ಷರ ಅವಗಾಹನಗೆ ತರಲು ಕೋರಿದೆ.
2. ಕಾರ್ಯದರ್ಶಿರವರ ಆಪ್ತ ಶಾಖೆಗೆ ಮಾಹಿತಿಗಾಗಿ.